# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಕ್ಷಿಣ ಕನ್ನಡ ಮತ್ತು ತುಮಕೂರು ಜಿಲ್ಲಾ ಪಂಚಾಯತಿಗಳ ಯೋಜನಾ ಘಟಕಗಳಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ಹುದ್ದೆ ಭರ್ತಿಯಾದ್ದರಿಂದ ವೇತನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 2 ಶಾಖೆಯ ಕಡತ ಸಂಖ್ಯೆ: ಆಇ 155 ವೆಚ್ಚ 2/2020

**ಪ್ರಸ್ತಾವನೆ:**

ದಕ್ಷಿಣ ಕನ್ನಡ ಮತ್ತು ತುಮಕೂರು ಜಿಲ್ಲಾ ಪಂಚಾಯತಿಗಳ ಯೋಜನಾ ಘಟಕದಲ್ಲಿ ತೆರವಾಗಿದ್ದ ಅಧಿಕಾರಿ/ಸಿಬ್ಬಂದಿಯವರುಗಳ ವೇತನ ವೆಚ್ಚಕ್ಕಾಗಿ ಲೆಕ್ಕ ಶೀರ್ಷಿಕೆ 3451–00–101–0–26–005ರಡಿ ಅನುಕ್ರಮವಾಗಿ ರೂ.1.86ಲಕ್ಷ ಮತ್ತು ರೂ.11.26ಲಕ್ಷ ಒಟ್ಟು ರೂ.13.12ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತಿ ಕಾರ್ಯಕ್ರಮದಡಿ ಕೋರಿರುವ ರೂ.13.12ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 288 ವೆಚ್ಚ 6/2020(ಇ) ದಿನಾಂಕ: 25ನೇ ಆಗಸ್ಟ್ 2020

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ13.12ಲಕ್ಷ (ರೂಪಾಯಿ ಹದಿಮೂರು ಲಕ್ಷದ ಹನ್ನೆರಡು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು. (ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಕ್ರಸಂ | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ದಕ್ಷಿಣ ಕನ್ನಡ | 3451–00–101–0–26–005 | 1.86 |
| 2 | ತುಮಕೂರು | | 11.26 |
| | ಒಟ್ಟು | | **13.12** |

1414880845
26.8.20

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು, ಯೋಜನಾ ಇಲಾಖೆ

4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ದಕ್ಷಿಣ ಕನ್ನಡ/ತುಮಕೂರು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ದಕ್ಷಿಣ ಕನ್ನಡ/ತುಮಕೂರು
7. ಆರ್ಥಿಕ ಇಲಾಖೆ ವೆಚ್ಚ 2 ಶಾಖೆ
8. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ